## 6.2 ಸ್ಪರ್ಧಾತ್ಮಕ ಪರೀಕ್ಷಾ ವಿಧಾನ: (ಗ್ರೂಪ್-ಬಿ ಹುದ್ದೆಗಳಿಗೆ)

| | |
|---|---|
| (ಎ) | ಪರೀಕ್ಷೆಯು ತಲಾ 200 ಅಂಕಗಳ ಎರಡು ಲಿಖಿತ ಪ್ರಶ್ನೆ ಪತ್ರಿಕೆಗಳನ್ನು ಒಳಗೊಂಡಿದ್ದು, ವಸ್ತು ನಿಷ್ಠ ಬಹು ಆಯ್ಕೆ ಮಾದರಿಯಲ್ಲಿ ಇರುತ್ತವೆ. ಪ್ರತಿಯೊಂದು ಪ್ರಶ್ನೆಯು ಋಣಾತ್ಮಕ (Negative) ಅಂಕದ ಸ್ವರೂಪದ್ದಾಗಿದ್ದು, ಪ್ರತಿಯೊಂದು ತಪ್ಪಾದ ಉತ್ತರಕ್ಕೆ ಪ್ರಶ್ನೆಗಳಿಗೆ ಹಂಚಿಕೆ ಮಾಡಲಾದ ಅಂಕಗಳಲ್ಲಿ ನಾಲ್ಕನೇ ಒಂದು ಭಾಗದಷ್ಟು(1/4) ಅಂಕಗಳನ್ನು ಕಡಿತಗೊಳಿಸಲಾಗುವುದು. |

| ಪತ್ರಿಕೆ / Paper | ವಿಷಯ | ಅಂಕಗಳು / Marks | ಅವಧಿ / Duration ಗಂಟೆ / Hours |
|---|---|---|---|
| 1 | ಸಾಮಾನ್ಯ ಪತ್ರಿಕೆ General Paper | 200 | 1½ ಗಂಟೆ |
| 2 | ನಿರ್ದಿಷ್ಟ ಪತ್ರಿಕೆ Specific Paper | 200 | 2 ಗಂಟೆ |

**ಸೂಚನೆ:-** ಸ್ಪರ್ಧಾತ್ಮಕ ಪರೀಕ್ಷೆಯ ಪಠ್ಯಕ್ರಮವನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.

(ಬಿ) ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಗಳೆರಡಲ್ಲೂ ಇರುತ್ತವೆ.

(ಸಿ) ಅಭ್ಯರ್ಥಿಯು ಅರ್ಹತೆಗಾಗಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿನ ಒಟ್ಟು ಅಂಕಗಳಲ್ಲಿ ಕನಿಷ್ಠ ಶೇಕಡ 35 ರಷ್ಟು ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ.

6.3 ಸದರಿ ಹುದ್ದೆಗಳ ನೇಮಕಾತಿಗಳ ಸ್ಪರ್ಧಾತ್ಮಕ ಪರೀಕ್ಷೆಯನ್ನು ಆಫ್ ಲೈನ್-ಓಎಂಆರ್ ಮಾದರಿ (Offline-OMR type) ಅಥವಾ ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ ಪರೀಕ್ಷೆ (Computer based recruitment test-CBRT) ಮುಖಾಂತರ ನಡೆಸಲಾಗುವುದು. ಈ ವಿಷಯದಲ್ಲಿ ಆಯೋಗದ ತೀರ್ಮಾನವೇ ಅಂತಿಮವಾಗಿರುತ್ತದೆ. ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ (Computer based recruitment test-CBRT)ಪರೀಕ್ಷೆಯನ್ನು ನಡೆಸಲು ತೀರ್ಮಾನಿಸಿದಲ್ಲಿ ಅಭ್ಯರ್ಥಿಗಳಿಗೆ ಈ ಸಂಬಂಧ ಸೂಚನೆಗಳನ್ನು ಹಾಗೂ ಅಣಕು ಪರೀಕ್ಷೆಯನ್ನು (Mock Test) ತೆಗೆದುಕೊಳ್ಳುವ ಬಗ್ಗೆ ಮಾಹಿತಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

## 6.4. ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರ:-

| |
|---|
| ಕನ್ನಡ ಭಾಷಾ ಪರೀಕ್ಷೆ / ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಆಯೋಗವು ನಿಗದಿಪಡಿಸುವ ಯಾವುದೇ ಕೇಂದ್ರ ಸ್ಥಳದಲ್ಲಿ ನಡೆಸಲಾಗುವುದು ಹಾಗೂ ಕನ್ನಡ ಭಾಷೆಯಲ್ಲಿರುವ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ಅಸ್ಪಷ್ಟತೆ ಇದ್ದಲ್ಲಿ ಅಭ್ಯರ್ಥಿಗಳು ಆಂಗ್ಲ ಭಾಷೆಯಲ್ಲಿರುವ ಪ್ರಶ್ನೆಗಳನ್ನು ನೋಡಿ ಅರ್ಥೈಸಿಕೊಳ್ಳುವುದು. |

ಸದರಿ ಹುದ್ದೆಗಳಿಗೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ / ಸ್ಪರ್ಧಾತ್ಮಕ ಪರೀಕ್ಷೆಗಳ ವೇಳಾಪಟ್ಟಿಯನ್ನು ನಂತರದಲ್ಲಿ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

ಅಭ್ಯರ್ಥಿಗಳು ಪರೀಕ್ಷೆಯ ಪ್ರವೇಶ ಪತ್ರಗಳನ್ನು ಆಯೋಗದ ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಳ್ಳಲು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಆಯೋಗದ ವೆಬ್ ಸೈಟ್ ನಲ್ಲಿಯೂ ಬಿತ್ತರಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಂಡು ಪರೀಕ್ಷೆಗೆ ಹಾಜರಾತಕ್ಕದ್ದು.

https://www.freshersnow.com/government-jobs-india/